ಸದನದಲ್ಲಿ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 20 ನೇ ಮಾರ್ಚ್, 2020

ಪಶು ವೈದ್ಯಕೀಯ ವಿಶ್ವವಿದ್ಯಾಲಯದಲ್ಲಿ ನಡೆದಿರುವ ಹಣ ದುರುಪಯೋಗದ ಬಗ್ಗೆ

ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ(ಶಿಕ್ಷಕರ ಕ್ಷೇತ್ರ):-

ಶ್ರೀ ಶರಣಪ್ಪ ಮಟ್ಟೂರ(ಶಿಕ್ಷಕರ ಕ್ಷೇತ್ರ):-

196 (1610+1613) ಮಾನ್ಯ ಪಶುಸಂಗೋಪನೆ ಹಾಗೂ ಹಜ್ ಮತ್ತು ವಕ್ಫ್ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕರ್ನಾಟಕ ಪಶು ವೈದ್ಯಕೀಯ ಪಶು ಹಾಗೂ ಮೀನುಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಬೀದರ್ ಇಲ್ಲಿನ ಕುಲಪತಿಗಳು ಹಾಗೂ ಇತರೆ ಅಧಿಕಾರಿಗಳು ಕೋಟ್ಯಾಂತರ ರೂಪಾಯಿಗಳ ದುರುಪಯೋಗ ಮಾಡಿರುವ ಹಗರಣ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯದ ಹಗರಣದ ಬಗ್ಗೆ ಇಲಾಖೆ ಕಾರ್ಯದರ್ಶಿಗಳು ತನಿಖೆ ಮಾಡಲು ಸರ್ಕಾರಕ್ಕೆ ಈಗಾಗಲೇ ಶಿಫಾರಸ್ಸು ಮಾಡಿರುವುದು ನಿಜವೇ;

(ಇ) ಇದಕ್ಕೆ ಸಂಬಂಧಿಸಿದ ಕಡತ ಸಂಖ್ಯೆ AHF 16 VET 2019 ಯಾವ ಹಂತದಲ್ಲಿದೆ;

(ಈ) ಸರ್ಕಾರವು ಯಾವ ಕಾಲಮಿತಿಯೊಳಗೆ ಈ ಹಗರಣದ ಬಗ್ಗೆ ತನಿಖೆ ಮಾಡಲು ಆದೇಶ ಹೊರಡಿಸುವುದು ;

(ಉ) ಸದರಿ ವಿಶ್ವವಿದ್ಯಾಲಯದಲ್ಲಿ ದಿನಾಂಕ:16.10.2018 ಮತ್ತು 17.10.2018 ರಂದು ವಿಶೇಷ ಬ್ಯಾಕ್‌ಲಾಗ್ ಬೋಧಕ ಹುದ್ದೆಗಳ ನೇಮಕಾತಿಗೆ ಅಧಿಸೂಚನೆ ಹೊರಡಿಸಲಾಗಿದೆಯೇ ;

(ಊ) ಸದರಿ ಅಧಿಸೂಚನೆಗಳಿಗೆ ವ್ಯವಸ್ಥಾಪನಾ ಮಂಡಳಿ ಅನುಮೋದನೆ ಇಲ್ಲದೆಯೇ; ದಿನಾಂಕ:17.10.2018ರ ಅಧಿಸೂಚನೆಯನ್ವಯ ಪ್ರಕ್ರಿಯೆ ನಡೆದಿದ್ದು ಬ್ಯಾಕ್‌ಲಾಗ್ ಹುದ್ದೆಗಳನ್ನು ಭರ್ತಿ ಮಾಡುವಾಗ ಸರ್ಕಾರ 2001ರಲ್ಲಿ ಹೊರಡಿಸಿರುವ ವಿಶೇಷ ನೇಮಕಾತಿ ಆದೇಶದ ಹಾಗೂ ಯು.ಜಿ.ಸಿ./ ವಿಶ್ವವಿದ್ಯಾಲಯದ ನೇಮಕಾತಿ ನಿಯಮಾವಳಿಗಳನ್ನು ಕಡ್ಡಾಯವಾಗಿ ಪಾಲಿಸಲಾಗಿದೆಯೇ ; ಪಾಲಿಸಿದ್ದಲ್ಲಿ, ವಿವರವಾದ ಮಾಹಿತಿ ನೀಡುವುದು ;

(ಋ) 2017-18 ಹಾಗೂ 2018-19ರ ಕರ್ನಾಟಕ ರಾಜ್ಯ ಲೆಕ್ಕ ಪರಿಶೋಧನಾ ವರದಿಯ ಅನ್ವಯ ಕುಲಪತಿಗಳು ವಿವಿಧ ಬಾಬ್ತುಗಳಿಗೆ ಕಾನೂನು ಬಾಹಿರವಾಗಿ ಖರ್ಚು ಮಾಡಿರುವ ಹಣಕ್ಕೆ ಇಲಾಖೆಯು ಆಕ್ಷೇಪಣೆ ವ್ಯಕ್ತಪಡಿಸಿರುವ ಮೊತ್ತವೆಷ್ಟು; ಹಾಗೂ ಕಡ್ಡಾಯವಾಗಿ ವಸೂಲಿ ಮಾಡಲು ಸೂಚಿಸಿರುವ ಮೊತ್ತ ಎಷ್ಟು ; (ವಿವರವಾದ ಮಾಹಿತಿ ನೀಡುವುದು)

(ಎ) ಅಕ್ರಮ ನೇಮಕಾತಿ ಮತ್ತು ಆಕ್ಷೇಪಣಾ ಹಾಗೂ ಕಡ್ಡಾಯ ವಸೂಲಾತಿಗೆ ಸರ್ಕಾರ ಸೂಚಿಸಿದ್ದ ಹಣದ ವಸೂಲಾತಿ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?